# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1091 |
| ಮಾನ್ಯ ಸದಸ್ಯರ ಹೆಸರು | ಶ್ರೀ ಶರಣಪ್ಪ ಮಟ್ಟೂರ |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | 20-12-2018 |

| | ಪ್ರಶ್ನೆ | ಉತ್ತರ |
|---|---|---|
| (ಅ) | ದಿ: 01-01-2016ರಲ್ಲಿ ಕೇಂದ್ರ ಸರ್ಕಾರ 7ನೇ ವೇತನ ಆಯೋಗದ ವರದಿಯನ್ನು ಜಾರಿಗೆ ತಂದಿದ್ದು, ಕರ್ನಾಟಕದಲ್ಲಿ ಇನ್ನೂ ಜಾರಿ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವಾಗ ಜಾರಿ ಮಾಡಲಾಗುವುದು; | ಬಂದಿದೆ. |
| (ಆ) | 2019ರ ಒಳಗೆ ಸದರಿ ವರದಿಯನ್ನು ರಾಜ್ಯದಲ್ಲಿ ಜಾರಿ ಮಾಡದಿದ್ದಲ್ಲಿ ಹಿಂಪಡೆಯುವುದಾಗಿ ವಿಶ್ವವಿದ್ಯಾಲಯಗಳ ಧನ ಆಯೋಗ (ಯುಜಿಸಿ)ದವರು ಬರೆದಿರುವ ಪತ್ರ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಜಾರಿ ಮಾಡಲಾಗುವುದು? | ವಿಶ್ವವಿದ್ಯಾಲಯ ಹಾಗೂ ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳಿಗೆ ಯು.ಜಿ.ಸಿ. 7ನೇ ವೇತನ ಶ್ರೇಣಿಯನ್ನು ಜಾರಿಗೊಳಿಸಲು ಕೇಂದ್ರ ಮಾನವ ಸಂಪನ್ಮೂಲ ಮಂತ್ರಾಲಯದಿಂದ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ. ಅದರಂತೆ ರಾಜ್ಯದಲ್ಲಿ ಯು.ಜಿ.ಸಿ. 7ನೇ ವೇತನ ಶ್ರೇಣಿಯನ್ನು ಜಾರಿಗೊಳಿಸಿ, ಕೇಂದ್ರ ಸರ್ಕಾರವು ಪಾವತಿಸಬೇಕಾಗಿರುವ ಹಿಂಬಾಕಿ ಮೊತ್ತದ ಬಗ್ಗೆ ದಿನಾಂಕ: 31.03.2019ರೊಳಗೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಬೇಕಾಗಿರುತ್ತದೆ.<br><br>ಆದ್ದರಿಂದ ಯು.ಜಿ.ಸಿ. 7ನೇ ವೇತನ ಶ್ರೇಣಿಯನ್ನು ಜಾರಿಗೊಳಿಸುವುದರಿಂದ ಉಂಟಾಗುವ ಆರ್ಥಿಕ ಹೊರೆಯ ಬಗ್ಗೆ ಪರಿಶೀಲಿಸಲು, ರಾಜ್ಯ ಸರ್ಕಾರದಿಂದ ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ಇವರ ಅದ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿತ್ತು. ಸದರಿ ಸಮಿತಿಯು ಸರ್ಕಾರಕ್ಕೆ ವರದಿಯನ್ನು ನೀಡಿದ್ದು, ಆರ್ಥಿಕ ಇಲಾಖೆಯ ಸಹಮತಿಗಾಗಿ ಪ್ರಸ್ತಾವನೆ ಸಲ್ಲಿಸಲಾಗಿದೆ. ಪ್ರಸ್ತುತ ಆರ್ಥಿಕ ಇಲಾಖೆಯ ಅಭಿಪ್ರಾಯವನ್ನು ನಿರೀಕ್ಷಿಸಲಾಗುತ್ತಿದೆ. |

ಸಂಖ್ಯೆ: ಇಡಿ 427 ಯುಎನ್ಇ 2018

(ಜಿ.ಟಿ. ದೇವೇಗೌಡ)

ಉನ್ನತ ಶಿಕ್ಷಣ ಸಚಿವರು.